ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ**

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು–560001**

ಸಂಖ್ಯೆ:ಸಿ2(2)ಸಿ.ಸಿ.ಎ/ಸು–1/2018–19 ದಿನಾಂಕ:21–03–2019

**ಜ್ಞಾಪನಾ**

ವಿಷಯ: ಇಲಾಖಾ ವಿಚಾರಣೆಗಳನ್ನು ನಡೆಸಲು ನೇಮಕಗೊಂಡು ಕಾರ್ಯನಿರ್ವಹಿಸುವ ವಿಚಾರಣಾಧಿಕಾರಿಗಳಿಗೆ ನೀಡುವ ಸಂಭಾವನೆ ಮೊತ್ತವನ್ನು ಪರಿಷ್ಕರಿಸಿರುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 29 ಸೇಇವಿ 2017 ದಿನಾಂಕ: 02/02/2019

-----

ಕರ್ನಾಟಕ ನಾಗರೀಕ ಸೇವಾ [ ವರ್ಗೀಕರಣ,ನಿಯಂತ್ರಣ ಮತ್ತು ಅಪೀಲು] ನಿಯಮಗಳು–1957ರಡಿ ಸರ್ಕಾರಿ ನೌಕರರ / ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ನೇಮಕಗೊಂಡು ಕಾರ್ಯನಿರ್ವಹಿಸುವ ವಿಚಾರಣಾಧಿಕಾರಿಗಳಿಗೆ ನೀಡುವ ಸಂಭಾವನೆ ಮೊತ್ತವನ್ನು ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಪರಿಷ್ಕರಿಸಿ ಆದೇಶಿಸಿರುತ್ತದೆ. ಆದೇಶದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಸರ್ಕಾರದ ಆದೇಶದಲ್ಲಿ ತಿಳಿಸಿರುವಂತೆ ನಿಯಮಾನುಸಾರ ಅಗತ್ಯ ಕ್ರಮವಹಿಸಲು ಇಲಾಖೆಯ ಅಧೀನ ಅಧಿಕಾರಿಗಳಿಗೆ ಸೂಚಿಸಿದೆ.

[ಅರುಳ್ ಕುಮಾರ್]
**ಜಂಟಿ ನಿರ್ದೇಶಕರು (ಆಡಳಿತ)**

ಗೆ,

1.ಎಲ್ಲಾ ಉಪನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ.

2.ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ.

ಪ್ರತಿಯನ್ನು:–

1.ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು–01 ರವರಿಗೆ.

2.ಮಾನ್ಯ ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಕಲಬುರುಗಿ ವಿಭಾಗ ರವರಿಗೆ.

3.ಮಾನ್ಯ ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಧಾರವಾಡ ವಿಭಾಗ ರವರಿಗೆ.

4.ಎಲ್ಲಾ ನಿರ್ದೇಶಕರು ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ.

5.ಎಲ್ಲಾ ಸಹ ನಿರ್ದೇಶಕರು / ಪ್ರಾಂಶುಪಾಲರು(ಸಿ.ಟಿ.ಇ) ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ.

6.ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ.

7.ಕಛೇರಿ ಪ್ರತಿ.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಇಲಾಖಾ ವಿಚಾರಣೆಗಳಲ್ಲಿ ವಿಚಾರಣಾಧಿಕಾರಿಗಳಾಗಿ ನೇಮಕಗೊಳ್ಳುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ಹಾಗೂ ಸೇವೆಯಲ್ಲಿರುವ ಅಧಿಕಾರಿಗಳಿಗೆ ನೀಡಲಾಗುತ್ತಿರುವ ಸಂಭಾವನೆ ಮೊತ್ತ ಪರಿಷ್ಕರಣೆ ಬಗ್ಗೆ.

ಓದಲಾಗಿದೆ: 1.ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 06 ಸೇಇವಿ 2011, ದಿನಾಂಕ:28.04.2011
2.ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 07 ಸೇಇವಿ 2012, ದಿನಾಂಕ:03.02.2012.
3. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 45 ಸೇಇವಿ 2014, ದಿನಾಂಕ:08.01.2015

ಪ್ರಸ್ತಾವನೆ:

ಕರ್ನಾಟಕ ನಾಗರಿಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ)ನಿಯಮಗಳು, 1957ರಡಿ ಸರ್ಕಾರಿ ನೌಕರರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿಯಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ಸರ್ಕಾರವು ಮೇಲೆ(1)ರಲ್ಲಿ ಓದಲಾದ ದಿನಾಂಕ:28.04.2011ರ ಆದೇಶದಲ್ಲಿ ಪ್ರತಿ ವಿಚಾರಣೆಗೆ ರೂ.15,000/-(ಹದಿನೈದು ಸಾವಿರ ರೂಪಾಯಿಗಳು) ಸಂಭಾವನೆಯನ್ನು(ವಾಹನ ಭತ್ಯೆಯೂ ಸೇರಿದಂತೆ)ನಿಗದಿಪಡಿಸಿದೆ. ಮೇಲೆ(3)ರಲ್ಲಿ ಓದಲಾದ ದಿನಾಂಕ:08.01.2015ರ ಆದೇಶದಲ್ಲಿ ಈ ಸಂಭಾವನೆಯನ್ನು ಏಕವ್ಯಕ್ತಿ ಆರೋಪಿತರಾಗಿರುವ ಇಲಾಖಾ ವಿಚಾರಣೆ ಪ್ರಕರಣಗಳಿಗೆ ಅನ್ವಯಿಸುವಂತೆ ಮುಂದುವರಿಸಿ, ಜಂಟಿ ಇಲಾಖಾ ವಿಚಾರಣೆಗಳಿಗೆ ಪ್ರತ್ಯೇಕ ಸಂಭಾವನೆ ನಿಗದಿಪಡಿಸಲಾಗಿದೆ.

ಕರ್ನಾಟಕ ನಾಗರಿಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ)ನಿಯಮಗಳು, 1957ರಡಿ ಸರ್ಕಾರಿ ನೌಕರರ ವಿರುದ್ಧ ಜರುಗಿಸುವ ಇಲಾಖಾ ವಿಚಾರಣೆಗಳಲ್ಲಿ ಸರ್ಕಾರದ ಸೇವೆಯಲ್ಲಿರುವ ಅಧಿಕಾರಿಗಳನ್ನು ವಿಚಾರಣಾಧಿಕಾರಿಗಳನ್ನಾಗಿ ನೇಮಕ ಮಾಡಿದಾಗ ಮತ್ತು ನಿಗದಿಪಡಿಸಿರುವ ಅವಧಿಯಲ್ಲಿಯೇ ವಿಚಾರಣಾ ವರದಿಯನ್ನು ನೀಡುವ ಪ್ರಕರಣಗಳಲ್ಲಿ ಮಾತ್ರ ವಿಚಾರಣಾಧಿಕಾರಿಗಳಿಗೆ ಸರ್ಕಾರವು ಮೇಲೆ (2)ರಲ್ಲಿ ಓದಲಾದ ದಿನಾಂಕ:03.02.2012ರ ಆದೇಶದಲ್ಲಿ ರೂ.5,000/-ಗಳ ಪ್ರೋತ್ಸಾಹಧನ/ಸಂಭಾವನೆಯನ್ನು ನಿಗದಿಪಡಿಸಿದೆ.

20925
14/2/19

ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿಗಳಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ಪ್ರಸ್ತುತ ಇರುವ ಸಂಭಾವನೆಯು 2011ರಲ್ಲಿ ನಿಗದಿಪಡಿಸಿರುವುದಾಗಿ ತಿಳಿಸಿ, ಈ ಸಂಭಾವನೆಯನ್ನು ಹೆಚ್ಚಳ ಮಾಡಲು ಬೇಡಿಕೆ ಸ್ವೀಕೃತವಾಗಿರುವ ಹಿನ್ನೆಲೆಯಲ್ಲಿ ವಿಚಾರಣಾಧಿಕಾರಿಗಳಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ನಿಗದಿಪಡಿಸಿದ ಸಂಭಾವನೆ ಜೊತೆಗೆ ಸರ್ಕಾರಿ ಸೇವೆಯಲ್ಲಿರುವ ಅಧಿಕಾರಿಗಳಿಗೆ ನೀಡಲಾಗುತ್ತಿರುವ ಪ್ರೋತ್ಸಾಹಧನವನ್ನು ಸಹ ಹೆಚ್ಚಿಸುವ ಬಗ್ಗೆ ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 29 ಸೇಇವಿ 2017, ದಿನಾಂಕ:02.02.2019**

ಪ್ರಸ್ತಾವನೆಯಲ್ಲಿ ತಿಳಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರಿಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ)ನಿಯಮಗಳು, 1957ರಡಿ ಮಾಡುವ ಇಲಾಖಾ ವಿಚಾರಣೆಯಲ್ಲಿ ವಿಚಾರಣಾಧಿಕಾರಿಯಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ಮತ್ತು ಸರ್ಕಾರದ ಸೇವೆಯಲ್ಲಿರುವ ಅಧಿಕಾರಿಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಕೆಳಕಂಡ ಸಂಭಾವನೆ/ಪ್ರೋತ್ಸಾಹಧನಗಳನ್ನು ನಿಗದಿಪಡಿಸಲಾಗಿದೆ.

(1) ಏಕವ್ಯಕ್ತಿ ಆರೋಪಿತರಾಗಿರುವ ಇಲಾಖಾ ವಿಚಾರಣೆ ಪ್ರಕರಣಗಳಲ್ಲಿ ವಿಚಾರಣಾಧಿಕಾರಿಯಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ರೂ.16,500/-ಗಳು(ಹದಿನಾರು ಸಾವಿರ ಐದು ನೂರು ರೂಪಾಯಿಗಳು)(ವಾಹನ ಭತ್ಯೆಯು ಸೇರಿದಂತೆ)

(2) ವಿಚಾರಣಾಧಿಕಾರಿಯಾಗಿ ನೇಮಕವಾದ ಮತ್ತು ನಿಗದಿಪಡಿಸಿದ ಅವಧಿಯಲ್ಲಿ ವಿಚಾರಣಾ ವರದಿಯನ್ನು ಸಲ್ಲಿಸಿದ ಸರ್ಕಾರದ ಸೇವೆಯಲ್ಲಿರುವ ಅಧಿಕಾರಿಗಳಿಗೆ ರೂ.5,500/--(ಐದು ಸಾವಿರ ಐದು ನೂರು ರೂಪಾಯಿಗಳು)

ಈ ಆದೇಶವನ್ನು ಆರ್ಥಿಕ ಇಲಾಖೆಯು ದಿನಾಂಕ:24.09.2018ರ ಟಿಪ್ಪಣಿ ಸಂಖ್ಯೆ:ಆಇ 738 ಸೇ-1/ 2018 ಮತ್ತು ದಿನಾಂಕ:17.12.2018ರ ಟಿಪ್ಪಣಿ ಸಂಖ್ಯೆ:ಆಇ 996 ಸೇ-1/2018ರಲ್ಲಿ ನೀಡಿದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

02/02/19
(ಎ.ವಿ.ಶೈಲಜ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಿ ಇದರ 100 ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಒದಗಿಸಲು ಕೋರಿದೆ.

ಪ್ರತಿ:
1. ಪ್ರಧಾನ ಮಹಾಲೇಖಪಾಲರು, (ಜಿ&ಎಸ್‌ಎಸ್‌ಎ), (ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
7. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು/ಕಾರ್ಯದರ್ಶಿಯವರು
8. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
9. ಎಲ್ಲಾ ಇಲಾಖಾ ಮುಖ್ಯಸ್ಥರು.
10. ಎಲ್ಲಾ ಪ್ರಾದೇಶಿಕ ಆಯುಕ್ತರು.
11. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
12. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
13. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
14. *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
15. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
16. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು.
17. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
18. ಎಲ್ಲಾ ಸಚಿವರ /ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು
19. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ್, ಚಾಣಕ್ಯಪುರಿ, ನವದೆಹಲಿ-110 011.
20. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
21. ಸಚಿವಾಲಯದ ಎಲ್ಲಾ ಶಾಖೆಗಳು.
22. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
23. ವಾರದ ರಾಜ್ಯಪತ್ರ.
24. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.